ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: ಸಿ5(5) ದ್ವಿ.ದ.ಸ.ಬಡ್ತಿ-12/2015-16 ದಿನಾಂಕ:29-01-2021

**ಜ್ಞಾಪನ**

ವಿಷಯ: ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್ ಡಿ ವೃಂದದಿಂದ ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ: 1.ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು1967
2.ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 57 ಎಸ್ ಸಿ ಆರ್ 94 ದಿನಾಂಕ: 19-01-1995.

********

ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ನೇರ ನೇಮಕಾತಿ ಮೂಲಕ 67% ಹಾಗೂ 33% ರ ಅನುಪಾತದಲ್ಲಿ ಗ್ರೂಪ್ ಡಿ ವೃಂದದಿಂದ ಮುಂಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಜಿಲ್ಲೆಗಳಲ್ಲಿನ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಮುಂಬಡ್ತಿಯನ್ನು ನಿಡಿರುವುದರಿಂದ ಜಿಲ್ಲೆಗಳಲ್ಲಿ ಸಾಕಷ್ಟು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಮುಂಬಡ್ತಿಗೆ ಲಭ್ಯವಾಗುತ್ತಿದ್ದು, ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ನೇಮಕಾತಿ ಸಕ್ಷಮ ಪ್ರಾಧಿಕಾರ ಆಯಾ ಜಿಲ್ಲಾ ಉಪನಿರ್ದೇಶಕರುಗಳಾಗಿದ್ದು, ಗ್ರೂಪ್ ಡಿ ವೃಂದದಿಂದ ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ಬಹುತೇಕ ಜಿಲ್ಲೆಗಳಲ್ಲಿ ಮುಂಬಡ್ತಿ ನೀಡಿಲ್ಲದಿರುವುದನ್ನು ಸಹ ಗಮನಿಸಲಾಗಿದೆ.

ಗ್ರೂಪ್ ಡಿ ವೃಂದದಿಂದ ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹ ಗ್ರೂಪ್ ಡಿ ನೌಕರರುಗಳಿಗೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯನ್ನು 15 ದಿನಗಳೊಳಗಾಗಿ ಪೂರ್ಣಗೊಳಿಸುವಂತೆ ಸೂಚಿಸಿದೆ. ಮುಂಬಡ್ತಿ ನೀಡಿದ ಬಗ್ಗೆ ಅನುಪಾಲನಾ ವರದಿಯನ್ನು ಸಹ ಸಲ್ಲಿಸುವಂತೆ ತಿಳಿಸಿದೆ.

[ಅನ್ಬುಕುಮಾರ್. ವಿ]
ಆಯುಕ್ತರು

ರವರಿಗೆ:

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಡಯಟ್ ಉಪ ನಿರ್ದೇಶಕರು (ಅಭಿವೃದ್ಧಿ)
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ [ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ರವರ ಮುಖೇನ]
4. ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

**ಪ್ರತಿಯನ್ನು**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಆಯುಕ್ತಾಲಯ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಆಯುಕ್ತಾಲಯ
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಹಾಗೂ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು
5. ನಿರ್ದೇಶಕರು[ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
6. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು
8. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮೈಸೂರು ವಿಭಾಗ, ಮೈಸೂರು.
9. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
10. ಉಪ ನಿರ್ದೇಶಕರು, ಶಿಕ್ಷಕರ ಕಲ್ಯಾಣ ನಿಧಿ ಕಛೇರಿ, ಬೆಂಗಳೂರು.
11. ಕಛೇರಿ ಪ್ರತಿ.